# ಕರ್ನಾಟಕ ವಿಧಾನ ಪರಿಷತ್ತು

| | |
|---|---|
| **ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ** | 49 |
| **ಮಾನ್ಯ ಸದಸ್ಯರ ಹೆಸರು** | ಶ್ರೀ ಅರವಿಂದ ಕುಮಾರ್ ಅರಳಿ (ವಿಧಾನ ಸಭೆಯಿಂದ ಚುನಾಯಿತರಾದವರು) |
| **ಉತ್ತರಿಸಬೇಕಾದ ದಿನಾಂಕ** | 04.12.2023 |
| **ಉತ್ತರಿಸುವ ಸಚಿವರು** | ವೈದ್ಯಕೀಯ ಶಿಕ್ಷಣ ಹಾಗೂ ಕೌಶಲ್ಯಾಭಿವೃದ್ಧಿ, ಉದ್ಯಮಶೀಲತೆ ಮತ್ತು ಜೀವನೋಪಾಯ ಸಚಿವರು |

<table>
<tr><th>ಕ್ರ. ಸಂ</th><th>ಪ್ರಶ್ನೆ</th><th>ಉತ್ತರ</th></tr>
<tr><td>ಅ)</td><td>ಬೀದರ್ ಜಿಲ್ಲಾ ಆಸ್ಪತ್ರೆಯಲ್ಲಿರುವ ವೈದ್ಯರು ಮತ್ತು ಸಿಬ್ಬಂದಿಗಳ ಸಂಖ್ಯೆ ಎಷ್ಟು; ಈ ಆಸ್ಪತ್ರೆಯಲ್ಲಿ ವೈದ್ಯರ ಮತ್ತು ಸಿಬ್ಬಂದಿಗಳ ಕೊರತೆಯಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಬಂದಿದ್ದಲ್ಲಿ, ಈ ಬಗ್ಗೆ ಸರ್ಕಾರ ತೆಗೆದುಕೊಂಡ ಕ್ರಮವೇನು;</td><td>ಬಂದಿದೆ.<br><br>ಬ್ರಿಮ್ಸ್ ಬೋಧಕ ಆಸ್ಪತ್ರೆ (ಹಳೆಯ ಜಿಲ್ಲಾ ಆಸ್ಪತ್ರೆ)ಯಲ್ಲಿರುವ ವೈದ್ಯರ ಮತ್ತು ಸಿಬ್ಬಂದಿಗಳ ವಿವರವನ್ನು ಅನುಬಂಧದಲ್ಲಿ ಒದಗಿಸಲಾಗಿದೆ.<br><br>ಬೀದರ್ ವೈದ್ಯಕೀಯ ವಿಜ್ಞಾನಗಳ ಸಂಸ್ಥೆಯಲ್ಲಿ ಖಾಲಿ ಇರುವ ಸೀನಿಯರ್ ರೆಸಿಡೆಂಟ್, ಜೂನಿಯರ್ ರೆಸಿಡೆಂಟ್ ಮತ್ತು ಟ್ಯೂಟರ್ ಗಳನ್ನು ಕಡ್ಡಾಯ ಗ್ರಾಮೀಣ ಸೇವೆಯಡಿ ನಿಯುಕ್ತಿಗೊಳಿಸಲು ವೈದ್ಯಕೀಯ ಶಿಕ್ಷಣ ನಿರ್ದೇಶನಾಲಯದವರಿಗೆ ಹಾಗೂ ಬೀದರ್ ವೈದ್ಯಕೀಯ ವಿಜ್ಞಾನಗಳ ಸಂಸ್ಥೆಯ ಬೋಧಕ ಆಸ್ಪತ್ರೆಯಲ್ಲಿ ಖಾಲಿ ಇರುವ ಬೋಧಕೇತರ ಹುದ್ದೆಗಳ ಭರ್ತಿಗೆ ಪ್ರಸ್ತಾವನೆಯನ್ನು ಸಂಸ್ಥೆಯವರು ಸರ್ಕಾರಕ್ಕೆ ಸಲ್ಲಿಸಿದ್ದು, ಪ್ರಸ್ತಾವನೆಯು ಪರಿಶೀಲನೆಯಲ್ಲಿದೆ.</td></tr>
<tr><td>ಆ)</td><td>ಬೀದರ್ ಜಿಲ್ಲಾ ಆಸ್ಪತ್ರೆಯಲ್ಲಿ ಮೂಲಭೂತ ಸೌಕರ್ಯಗಳ ಕೊರತೆಯಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಹಾಗಿದ್ದಲ್ಲಿ, ಮೂಲಭೂತ ಸೌಲಭ್ಯಗಳನ್ನು ಒದಗಿಸುವ ನಿಟ್ಟಿನಲ್ಲಿ ಸರ್ಕಾರ ಕೈಗೊಂಡಿರುವ ಕ್ರಮಗಳೇನು;</td><td>ಬೀದರ್ ವೈದ್ಯಕೀಯ ವಿಜ್ಞಾನಗಳ ಸಂಸ್ಥೆಯ ಬೋಧಕ ಆಸ್ಪತ್ರೆ (ಹಳೆಯ ಜಿಲ್ಲಾ ಆಸ್ಪತ್ರೆ) ಬೀದರ್‌ನಲ್ಲಿ ಮೂಲಭೂತ ಸೌಕರ್ಯಗಳನ್ನು ಮೇಲ್ದರ್ಜೆಗೇರಿಸಲು ಕೈಗೊಂಡಿರುವ ಕ್ರಮಗಳ ವಿವರಗಳು;<br><table><tr><td>01</td><td>ಸಿವಿಲ್ ನಿರ್ವಹಣೆ</td><td>ಕಟ್ಟಡದ ದುರಸ್ತಿ ಕಾರ್ಯಗಳಿಗಾಗಿ ಲೋಕೋಪಯೋಗಿ ಇಲಾಖೆಯಿಂದ ವಿಸ್ತೃತ ಅಂದಾಜು ಪಟ್ಟಿ ಸ್ವೀಕರಿಸಲಾಗಿದ್ದು, ಮುಂದಿನ ಕ್ರಮ ಪ್ರಗತಿಯಲ್ಲಿರುತ್ತದೆ.</td></tr><tr><td>02</td><td>ಅಗ್ನಿ ಶಾಮಕ ಸೇವೆಗಳು</td><td>ಸದರಿ ಸೇವೆಗಳನ್ನು ಕಾರ್ಯಗತಗೊಳಿಸಲು Pre-NOC ಪಡೆಯುವ ಪ್ರಕ್ರಿಯೆ ಪ್ರಗತಿಯಲ್ಲಿದ್ದು, ದಂಡ ಶುಲ್ಕ ವಿನಾಯಿತಿಗಾಗಿ ಗೃಹ ಇಲಾಖೆಯ ಅನುಮೋದನೆಗಾಗಿ ಪತ್ರ ಬರೆಯಲಾಗಿದೆ.</td></tr></table></td></tr>
</table>

| | | | | |
|---|---|---|---|---|
| | | 03 | ಲಿಫ್ಟ್ ಸೇವೆಗಳು | ಲಿಫ್ಟ್ ನಿರ್ವಹಣೆ AMC/CMCಗಳು ಕೈಗೊಳ್ಳುವ ಅವಶ್ಯಕತೆ ಇದ್ದು, ಹೆಚ್ಚುವರಿ ಅನುದಾನ ಮಂಜೂರಾತಿಗಾಗಿ ಪ್ರಸ್ತಾವನೆಯು ಸರ್ಕಾರದಲ್ಲಿ ಸ್ವೀಕೃತವಾಗಿದ್ದು ಪರಿಶೀಲಿನೆಯಲ್ಲಿರುತ್ತದೆ. |
| | | 04 | ಭದ್ರತಾ ಸೇವೆಗಳು | ಈ ಸಂಬಂಧ 60 ಸ್ವಚ್ಛತಾ ಸಿಬ್ಬಂದಿಗಳ ಹೊರಗುತ್ತಿಗೆ ನೇಮಕಾತಿಗಾಗಿ ಅನುಮೋದನೆ ನೀಡಲಾಗಿದ್ದು, ಪ್ರಸ್ತುತ ಜಿಲ್ಲಾಧಿಕಾರಿಗಳು, ಬೀದರ್ ಇವರ ಅಧೀನದಲ್ಲಿ ಬರುವ ಜಿಲ್ಲಾ ವಿವಿದೋದ್ದೇಶ ಸಹಕಾರ ಸಂಘದಿಂದ ಹೊರಗುತ್ತಿಗೆ ಸೇವೆ ಪಡೆಯಲಾಗುತ್ತಿದೆ |
| | | 05 | ಸ್ವಚ್ಛತಾ ಸಿಬ್ಬಂದಿಗಳ ಸೇವೆಗಳು | |
| **ಇ)** | ಬೀದರ್ ಜಿಲ್ಲಾ ವ್ಯಾಪ್ತಿಯಲ್ಲಿ ಕಾರ್ಯನಿರ್ವಹಿಸುತ್ತಿರುವ ಸರ್ಕಾರಿ ತಾಲ್ಲೂಕು ಆಸ್ಪತ್ರೆ ಹಾಗೂ ಪಿಹೆಚ್‌ಸಿ ಅಂಡ್ ಸಿಹೆಚ್‌ಸಿ ಆರೋಗ್ಯ ಕೇಂದ್ರಗಳ ಸಂಖ್ಯೆ ಎಷ್ಟು? | ಬೀದರ್ ಜಿಲ್ಲಾ ವ್ಯಾಪ್ತಿಯಲ್ಲಿ 4 ತಾಲ್ಲೂಕು ಸಾರ್ವಜನಿಕ ಆಸ್ಪತ್ರೆ, 11 ಸಮುದಾಯ ಆರೋಗ್ಯ ಕೇಂದ್ರ, 50 ಗ್ರಾಮೀಣ ಪ್ರಾಥಮಿಕ ಆರೋಗ್ಯ ಕೇಂದ್ರಗಳು ಮತ್ತು 6 ನಗರ ಪ್ರಾಥಮಿಕ ಆರೋಗ್ಯ ಕೇಂದ್ರಗಳು ಕಾರ್ಯನಿರ್ವಹಿಸುತ್ತಿವೆ. | | |

**ಸಂಖ್ಯೆ:** ಎಂಇಡಿ 590 ಎಂಎಸ್ಎಫ್ 2023

**(ಡಾ|| ಶರಣಪ್ರಕಾಶ ಆರ್. ಪಾಟೀಲ)**
ವೈದ್ಯಕೀಯ ಶಿಕ್ಷಣ ಹಾಗೂ
ಕೌಶಲ್ಯಾಭಿವೃದ್ಧಿ, ಉದ್ಯಮಶೀಲತೆ ಮತ್ತು
ಜೀವನೋಪಾಯ ಸಚಿವರು